## ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಡಿ.401/2015/ಸನಿಕಾಸ–2

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಭೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 3.4.2017

### ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ

**ವಿಷಯ:** ಹೊಸಕೋಟೆ ತಾಲ್ಲೂಕು ದೊಡ್ಡಗಟ್ಟಿಗನಬ್ಬೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಪೂಜೇನ ಅಗ್ರಹಾರ ಗ್ರಾಮದಲ್ಲಿ ಮುಖ್ಯ ರಸ್ತೆಗೆ ಸಂಪರ್ಕಿಸುವ 2 ಕಾಂಕ್ರೀಟ್ ರಸ್ತೆಗಳಿಗೆ ಅಕ್ರಮವಾಗಿ ನಿರ್ಮಿಸಿದ ಅಡ್ಡಗೋಡೆಯನ್ನು ತೆರವುಗೊಳಿಸಲು ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡಲು ಕೋರಿ.

*******

ಶ್ರೀ ರವಿ.ಸಿ., ಪೂಜೇನ ಅಗ್ರಹಾರ, ಹೊಸಕೋಟೆ ತಾಲ್ಲೂಕಿನ ನಿವಾಸಿ, (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ (1) ಶ್ರೀ ಶ್ರೀನಿವಾಸ ಮೂರ್ತಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ದೊಡ್ಡಗಟ್ಟಿಗನಬ್ಬೆ ಗ್ರಾಮಪಂಚಾಯತಿ, ಹೊಸಕೋಟೆ ತಾಲ್ಲೂಕು, (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:–**

ದೂರುದಾರರು ತಮ್ಮ ದೂರಿನಲ್ಲಿ ಹೊಸಕೋಟೆ ತಾಲ್ಲೂಕು ದೊಡ್ಡಗಟ್ಟಿಗನಬ್ಬೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಪೂಜೇನ ಅಗ್ರಹಾರ ಗ್ರಾಮದಲ್ಲಿ ಮುಖ್ಯ ರಸ್ತೆ ಪುಟ್ಟಪ್ಪನ ಮನೆಯಿಂದ ಯರಗಪ್ಪನ ಮನೆಯವರೆಗೆ 2003–04ನೇ ಸಾಲಿನಲ್ಲಿ ಎಸ್.ಜೆ.ಆರ್. ವೈ ಯೋಜನೆಯಡಿ ರಸ್ತೆ ಮತ್ತು ಚರಂಡಿ ನಿರ್ಮಿಸಿದ್ದು, ಇರುತ್ತದೆ. ಈ ರಸ್ತೆಯಲ್ಲಿ ಜನರು ಓಡಾಡುತ್ತಿದ್ದು, ಆದರೆ ಈ ರಸ್ತೆಯ ವಾಸಿಗಳಾದ ಮಾರಪ್ಪ, ಕೃಷ್ಣಪ್ಪ ಮತ್ತು ಶಿವರಾಜ್ ಎಂಬುವವರು ರಾಜಕೀಯ ದುರುದ್ದೇಶದಿಂದ ಮುಖ್ಯ ರಸ್ತೆಗೆ ಸಂಪರ್ಕಿಸುವ 2 ಕಾಂಕ್ರೀಟ್ ರಸ್ತೆಗಳಿಗೆ ಅಡ್ಡಲಾಗಿ ತಡೆಗೋಡೆ ನಿರ್ಮಿಸಿರುತ್ತಾರೆ. ಈ ಅಡ್ಡಗೋಡೆಯನ್ನು ತೆರವುಗೊಳಿಸಲು ಎದುರುದಾರರಿಗೆ ಅರ್ಜಿ ಸಲ್ಲಿಸಿದರೂ ಸಹಾ ಯಾವುದೇ ಕ್ರಮಕೈಗೊಂಡಿರುವುದಿಲ್ಲ. ಆದ್ದರಿಂದ ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ದೂರು ಸಲ್ಲಿಸಿದ್ದಾರೆ.

3. ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ತಾನು ಹಾಗೂ ಕಾರ್ಯನಿರ್ವಹಕ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಲಾಗಿ ಕೃಷ್ಣಪ್ಪ, ಮಾರಪ್ಪ ಮತ್ತು ಶಿವರಾಜ್ ಅವರು ಇದು ತಮ್ಮ ಸ್ವಂತ ಜಮೀನಾಗಿದ್ದು, ತಮ್ಮ ಸ್ವಂತ ಖರ್ಚಿನಿಂದ ರಸ್ತೆಯನ್ನು ನಿರ್ಮಿಸಿಕೊಂಡಿದ್ದಾಗಿ ತಿಳಿಸಿರುತ್ತಾರೆ. ಈ ಜಾಗಕ್ಕೆ ಸಂಬಂಧಿಸಿದಂತೆ ಜೆ.ಎಂ.ಎಫ್.ಸಿ. ನ್ಯಾಯಾಲಯದಲ್ಲಿ ಒ.ಎಸ್. ನಂ.112/2011 ರಂತೆ ದಾವೆ ಚಾಲ್ತಿಯಲ್ಲಿದ್ದು, ಅದರ ಅಂತಿಮ ಆದೇಶದವಾದ ನಂತರ ಮುಂದಿನ ಕ್ರಮಕ್ಕೈಗೊಳ್ಳಲಾಗುವುದೆಂದು ತಿಳಿಸಿರುತ್ತಾರೆ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

4. ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ದೂರಿನಲ್ಲಿನ ಅಂಶಗಳನ್ನು ಪುನರುಚ್ಚರಿಸಿದ್ದಾರೆ.

5. ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ ಮತ್ತು ದಾಖಲಾತಿಗಳು, ಮತ್ತು ಪ್ರತ್ಯುತ್ತರ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ 2003-04ನೇ ಸಾಲಿನ ಎಸ್‌ಜೆಆರ್‌ವೈ ಯೋಜನೆಯ ಕಡತ ಪರಿಶೀಲಿಸಲಾಗಿ, ಪೂಜೇನ ಅಗ್ರಹಾರ ಗ್ರಾಮದಲ್ಲಿನ ಪುಟ್ಟಪ್ಪನಮನೆಯಿಂದ ಯರಗಪ್ಪನ ಮನೆಯವರೆಗೆ ಚರಂಡಿ ಕಾಮಗಾರಿ ಎಂಬ ಕಾಮಗಾರಿಯನ್ನು ಗ್ರಾಮಸಭೆಯ ಅನುಮೋದನೆ ಪಡೆದು ಕ್ರಿಯಾ ಯೋಜನೆಯಲ್ಲಿ ಅಳವಡಿಸಿ ನಿರ್ವಹಿಸಲಾಗಿದೆ. ಆದರೆ ದೂರುದಾರರ ಅರ್ಜಿಯ ಮೇರೆಗೆ ಕಡತವನ್ನು ಪರಿಶೀಲಿಸಿದಾಗ ರಸ್ತೆ ಕಾಮಗಾರಿ ನಡೆದಿರುವಂತಹ ಯಾವುದೇ ದಾಖಲೆಗಳು ಲಭ್ಯವಿರುವುದಿಲ್ಲ.

6. 2006-07ನೇ ಸಾಲಿನಲ್ಲಿ ಸುವರ್ಣ ಗ್ರಾಮೋದಯ ಯೋಜನೆಗೆ ಈ ಗ್ರಾಮ ಆಯ್ಕೆಯಾಗಿದ್ದು, 27.95 ಲಕ್ಷ ರೂ.ಗಳ ಕ್ರಿಯಾಯೋಜನೆ ತಯಾರಿಸಲಾಗಿದ್ದು, ಅದರಲ್ಲಿ ಡಾಂಬರು ರಸ್ತೆ, ಕಾಂಕ್ರೀಟ್ ರಸ್ತೆ ನಿರ್ಮಾಣ, ಚರಂಡಿ ನಿರ್ಮಾಣ ಹಾಗೂ ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ಆದ್ಯತೆ ನೀಡಲಾಗಿರುತ್ತದೆ. ಆದರೆ ಈ ಕ್ರಿಯ ಯೋಜನೆಯನ್ನು ಗ್ರಾಮಪಂಚಾಯತಿ ಅನುಮೋದಿಸಿರುವುದಿಲ್ಲ, ಬದಲಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಮತ್ತು ಅಧೀಕ್ಷಕ ಅಭಿಯಂತರು, ಪಂಚಾಯತ್ ರಾಜ್ ಇಂಜಿನಿಯರಿಂಗ ವಿಭಾಗ, ಅವರು ಅನುಮೋದಿಸಿರುತ್ತಾರೆಂದು ಆಕ್ಷೇಪಣೆಯಲ್ಲಿ ತಿಳಿಸಿರುತ್ತಾರೆ.

7. ದೂರುದಾರರ ಆಪಾದನೆಯನ್ನು ಪರಿಶೀಲಿಸಿದಾಗ ಒಂದು ರಸ್ತೆಯನ್ನು ಸಾರ್ವನಿಕರು ಉಪಯೋಗಿಸುತ್ತಿದ್ದಾಗ ಅದನ್ನು ಒಬ್ಬ ಅಥವಾ ಕೆಲವು ವ್ಯಕ್ತಿಗಳು ಏಕಾಏಕಿ ತಡೆಗೋಡೆ ನಿರ್ಮಿಸಿ,

ಬಂದ್ ಮಾಡಿದಾಗ ಅದರ ಬಗ್ಗೆ ಸಾರ್ವಜನಿಕರು ತಕರಾರು ಎತ್ತುವುದು ಹಾಗೂ ರಸ್ತೆಯನ್ನು ತೆರವುಗೊಳಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಅರ್ಜಿ ಸಲ್ಲಿಸುವುದು ಸಾಮಾನ್ಯವಾಗಿದೆ. ಆಗ ಸಂಬಂಧಿಸಿದ ಅಧಿಕಾರಿಗಳು ಅದನ್ನು ಪರಿಶೀಲಿಸಿ ಅದು ಸಾರ್ವಜನಿಕ ಆಸ್ತಿಯೋ ಅಥವಾ ಖಾಸಗಿ ಆಸ್ತಿಯೋ ಎನ್ನುವುದನ್ನು ಪರಿಶೀಲಿಸಿ, ಆ ಪ್ರಕಾರ ಕ್ರಮಕೈಗೊಳ್ಳಬೇಕಾಗಿರುತ್ತದೆ.

8. ಆದರೆ ಈ ಪ್ರಕರಣದಲ್ಲಿ ಎದುರುದಾರರು ಕೃಷ್ಣಪ್ಪ ಮಾರಪ್ಪ ಮತ್ತು ಶಿವರಾಜ್ ಅವರು ರಸ್ತೆಗೆ ತಡೆಗೋಡೆ ನಿರ್ಮಿಸಿದಾಗ ಅದು ಅವರ ಖಾಸಗಿ ಸ್ವತ್ತೇ ಅಥವಾ ಸಾರ್ವಜನಿಕ ಸ್ವತ್ತೇ ಎನ್ನುವುದನ್ನು ಪರಿಶೀಲಿಸಿ ದೂರುದಾರರಿಗೆ ಆ ಬಗ್ಗೆ ತಿಳುವಳಿಕೆ ನೀಡುವುದನ್ನು ಬಿಟ್ಟು, ಕೇವಲ ಈ ರಸ್ತೆಯ ಬಗ್ಗೆ ಯಾವುದೇ ಸರ್ಕಾರಿ ಕ್ರಿಯ ಯೋಜನೆ ಇಲ್ಲವೆಂದು ತಿಳಿಸಿರುತ್ತಾರೆ. ದೂರುದಾರರು ಹಾಜರುಪಡಿಸಿದ ಫೋಟೋಗಳನ್ನು ನೋಡಲಾಗಿ, ಇದು ಸಾರ್ವಜನಿಕ ರಸ್ತೆಯೆಂದು ಕಂಡುಬರುತ್ತದೆ. ಎದುರುದಾರರು ತಮ್ಮ ಕರ್ತವ್ಯವನ್ನು ಪರಿಣಾಮಕಾರಿಯಾಗಿ ನಿರ್ವಹಿಸಿ ದೂರುದಾರರಿಗೆ ಪರಿಹಾರ ನೀಡಲು ನಿರ್ಲಕ್ಷವಹಿಸಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ.

9. ಆದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ಹೊಸಕೋಟೆ ತಾಲ್ಲೂಕು ದೊಡ್ಡಗಟ್ಟಿಗನಬ್ಬೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಪೂಜೇನ ಅಗ್ರಹಾರ ಗ್ರಾಮದಲ್ಲಿ ಮುಖ್ಯ ರಸ್ತೆಗೆ ಸಂಪರ್ಕಿಸುವ 2 ಕಾಂಕ್ರೀಟ್ ರಸ್ತೆಗಳಿಗೆ ಅಕ್ರಮವಾಗಿ ನಿರ್ಮಿಸಿದ ಅಡ್ಡಗೋಡೆಯನ್ನು ತೆರವುಗೊಳಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

10. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಒಂದು ತಿಂಗಳೊಳಗೆ ವರದಿ ಸಲ್ಲಿಸಲು ಕೋರಲಾಗಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

Sd/- 3/4/17

[ ನ್ಯಾಯಮೂರ್ತಿ ಸುಭಾಷ್ ಬಿ ಆಡಿ]
ಉಪಲೋಕಾಯುಕ್ತರು,
ಕರ್ನಾಟಕ ರಾಜ್ಯ.

3/4